ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ	:	**839**
ಸದಸ್ಯರ ಹೆಸರು	:	**ಶ್ರೀ ಬೋಸರಾಜು ಎನ್.ಎಸ್. (ವಿಧಾನ ಸಭೆಯಿಂದ ಆಯ್ಕೆಯಾದವರು)**
ಉತ್ತರಿಸುವ ಸಚಿವರು	:	**ಕಂದಾಯ ಸಚಿವರು**
ಉತ್ತರಿಸುವ ದಿನಾಂಕ	:	**11.03.2020**

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆಯ ಮಾನವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಕರ್ನಾಟಕ ನೀರಾವರಿ ನಿಗಮದಿಂದ 4 ಎಕರೆ ಜಮೀನನ್ನು ಕಂದಾಯ ಇಲಾಖೆಗೆ ಹಸ್ತಾಂತರಿಸಲಾಗಿದೆ, ಸದರಿ ಸ್ಥಳದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಜಿಲ್ಲಾಧಿಕಾರಿಗಳಿಂದ ಸೂಕ್ತ ಪ್ರಸ್ತಾವನೆ ಸ್ವೀಕೃತವಾದ ನಂತರ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಕ್ರಮವಹಿಸಲಾಗುವುದು.
ಆ)	ರಾಯಚೂರು ಜಿಲ್ಲೆಯಲ್ಲಿ ಭೂಮಾಪಕ ಇಲಾಖೆಯಲ್ಲಿ ಸರ್ವೇಯರ್ ಕೊರತೆಯಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ಜಿಲ್ಲೆಯಲ್ಲಿ ಭೂ ಮಾಪಕರ ಹುದ್ದೆ ಮಂಜೂರಾತಿ, ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಈ ಕೆಳಗಿನಂತಿದೆ. ಮಂಜೂರು: 107 / ಭರ್ತಿ: 95 / ಖಾಲಿ: 12 ಪ್ರಸ್ತುತ ರಾಯಚೂರು ಜಿಲ್ಲೆಯಲ್ಲಿ ಭೂಮಾಪಕರ ಕೊರತೆ ಇರುವುದಿಲ್ಲ. ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ಮುಂದೆ ಮಾಡಲಾಗುವ ನೇಮಕಾತಿ ಅಥವಾ ವರ್ಗಾವಣೆಯಿಂದ ಭರ್ತಿ ಮಾಡಲಾಗುವುದು
ಇ)	ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಯಚೂರು ಜಿಲ್ಲೆಯಲ್ಲಿ ಒಟ್ಟು 67 ಹುದ್ದೆಗಳು ಖಾಲಿ ಇವೆ. 51 ಗ್ರಾಮ ಲೆಕ್ಕಿಗರ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು,ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದೆ.

ಈ)	ರಾಯಚೂರು ಜಿಲ್ಲೆಯಲ್ಲಿರುವ ಸಂಪೂರ್ಣ ಪೋಡಿ ಮುಕ್ತ ಗ್ರಾಮಗಳು ಎಷ್ಟು?	ರಾಯಚೂರು ಜಿಲ್ಲೆಯಲ್ಲಿ ಒಟ್ಟು 892 ಗಾಮಗಳ ಪೈಕಿ 478 ಗ್ರಾಮಗಳನ್ನು ಪೋಡಿಮುಕ್ತ ಯೋಜನೆಯಡಿ ಅಳತೆಗೆ ಆಯ್ಕೆ ಮಾಡಿಕೊಂಡಿದ್ದು, 474 ಗ್ರಾಮಗಳ ಅಳತೆ ಕೆಲಸ ಪೂರ್ಣಗೊಳಿಸಲಾಗಿದೆ. ಈ ಪೈಕಿ 473 ಗ್ರಾಮಗಳಲ್ಲಿ ದುರಸ್ತಿ ಕಾರ್ಯ ಮತ್ತು 389ಗ್ರಾಮಗಳಲ್ಲಿ ಪಹಣಿ ಇಂಡೀಕರಣ ಪೂರ್ಣಗೊಳಿಸಿ 86640 ಬ್ಲಾಕ್ ಗಳಿಗೆ ಏಕಮಾಲಿಕತ್ವದ ಪಹಣಿ ಸೃಜಿಸಲಾಗಿರುತ್ತದೆ.

ಕಂಇ 22 ಡಬ್ಲ್ಯೂಬಿಆರ್ 2020

(ಆರ್. ಅಶೋಕ)
ಕಂದಾಯ ಸಚಿವರು